ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 10 ಮುನೋಸೇ(1) 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 31-05-2021

## ಸುತ್ತೋಲೆ

ವಿಷಯ: ಉಪ ನೋಂದಣಿ ಕಛೇರಿಗಳಲ್ಲಿ ಸರ್ಕಾರದ ಹಣ ಖಾಸಗಿ ಖಾತೆಗಳಿಗೆ ಅಕ್ರಮ ವರ್ಗಾವಣೆಯಾಗುತ್ತಿರುವ ಬಗ್ಗೆ/ ಸರ್ಕಾರದ ಲೆಕ್ಕ ಶೀರ್ಷಿಕೆ/ ಕಛೇರಿಗಳು ಕಾನೂನು ಬಾಹಿರ ಮತ್ತು ಹವಾಲ ವ್ಯವಹಾರಗಳಿಗೆ ದುರ್ಬಳಕೆಯಾಗುತ್ತಿರುವ ಬಗ್ಗೆ.

ಉಲ್ಲೇಖ: 1) ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರವರ ಪತ್ರ ಸಂಖ್ಯೆ: ಎಸ್.ಟಿ.ಪಿ./65/2020-21 ದಿನಾಂಕ: 05-02-2021.

2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಪತ್ರ ಸಂಖ್ಯೆ: ಮುಕಾ/2319105/2021 ದಿನಾಂಕ: 23-02-2021.

* * * * *

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಉಪ ನೋಂದಣಿ ಕಛೇರಿಗಳಲ್ಲಿ ಸರ್ಕಾರದ ಹಣ ಖಾಸಗಿ ಖಾತೆಗಳಿಗೆ ಅಕ್ರಮ ವರ್ಗಾವಣೆಯಾಗುತ್ತಿರುವ ಬಗ್ಗೆ/ ಸರ್ಕಾರದ ಲೆಕ್ಕ ಶೀರ್ಷಿಕೆ/ ಕಛೇರಿಗಳು ಕಾನೂನು ಬಾಹಿರ ಮತ್ತು ಹವಾಲ ವ್ಯವಹಾರಗಳಿಗೆ ದುರ್ಬಳಕೆಯಾಗುತ್ತಿದ್ದು, ಎಲ್ಲಾ ಉಪ ನೋಂದಣಿ ಕಛೇರಿಯಲ್ಲಿ ನಗದು ಮತ್ತು ಡಿಮ್ಯಾಂಡ್ ಡ್ರಾಫ್ಟ್‌ಗಳು ಸ್ವೀಕರಿಸುವುದನ್ನು ನಿಷೇದಿಸಲಾಗಿದೆ. ಎಲ್ಲಾ ಹಣಕಾಸು ವ್ಯವಹಾರಗಳು ಬ್ಯಾಂಕ್ ಮೂಲಕ ಅಥವಾ ಡಿಜಿಟಲ್ ಪೇಮೆಂಟ್ ಮೂಲಕವೇ ನಡೆಸಬೇಕು.

ಖಜಾನೆ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಲಿಂಕ್ ಮಾಡುವವರೆಗೆ ಹಣ ಪಾವತಿಸಿರುವ ಬಗ್ಗೆ ಖಚಿತಪಡಿಸಿಕೊಂಡು ಉಪ ನೋಂದಣಾಧಿಕಾರಿಗಳು ಪ್ರಮಾಣೀಕರಿಸಿದ ನಂತರವೇ ನೋಂದಣಿ ಮಾಡಲು ಆದೇಶಿಸಿದೆ.

ಇದನ್ನು ಹೊರತುಪಡಿಸಿ, ಬೇರೆ ಯಾವುದೇ ವಿಧಾನದಲ್ಲಿ ನಗದು ರೂಪದಲ್ಲಿ ಸ್ವೀಕರಿಸಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.

(ಕೆ.ಏಕೇಶ್ ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)

ಇವರಿಗೆ;

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು- ಇ-ಗೆಜೆಟ್‌ನಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಎ&ಇ), ಅಂಚೆ ಪಟ್ಟಿಗೆ ಸಂಖ್ಯೆ: 5329, ಪಾರ್ಕ್‌ಹೌಸ್ ರಸ್ತೆ ಕರ್ನಾಟಕ, ಬೆಂಗಳೂರು-560 001.

. . . 2

2. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, ಬೆಂಗಳೂರು.
3. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳು/ ಹಿರಿಯ ಉಪ ನೋಂದಣಾಧಿಕಾರಿಗಳು/ಹೆಚ್ಚುವರಿ ಉಪ ನೋಂದಣಾಧೀಕಾರಿಗಳು/ ಉಪ ನೋಂದಣಾಧಿಕಾರಿಗಳು – ಐಜಿಆರ್ ರವರ ಮುಖಾಂತರ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ಭೂಮಿ, ಯುಪಿಓಆರ್) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ) ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶಾಖಾ ರಕ್ಷಾ ಕಡತ ಮತ್ತು ಹೆಚ್ಚುವರಿ ಪ್ರತಿಗಳು.